# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 979 |
| ಉತ್ತರಿಸಬೇಕಾದ ದಿನಾಂಕ | : | 24.02.2023. |
| ಸದಸ್ಯರ ಹೆಸರು | : | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲುಬುರಗಿಯಲ್ಲಿ ಅಂತರಾಷ್ಟ್ರೀಯ ಕ್ರೀಡಾಂಗಣ ನಿರ್ಮಾಣ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದ್ದೆಯೇ; ಹಾಗಿದ್ದಲ್ಲಿ, ಸರ್ಕಾರ ಇದುವರೆವಿಗೂ ಯಾವ ಕ್ರಮ ಕೈಗೊಂಡಿದೆ; | ಹೌದು, ಸರ್ಕಾರದ ಮುಂದಿದೆ.<br><br>ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕಲಬುರಗಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ಅಂತರ್ ರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ಹಾಗೂ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಕೀರ್ಣವನ್ನು ನಿರ್ಮಿಸುವ ಕಾಮಗಾರಿಗೆ ವಿಸ್ತೃತ ವರದಿಯನ್ನು ಸಿದ್ಧಪಡಿಸಲು ಹಾಗೂ ಯೋಜನಾ ಸಮಾಲೋಚನಾ ಸೇವೆಯನ್ನು ನೀಡಲು ಈಗಾಗಲೇ ಯೋಜನಾ ಸಮಾಲೋಚಕರನ್ನು ನೇಮಕ ಮಾಡಿಕೊಳ್ಳಲಾಗಿದ್ದು, ಪ್ರಸ್ತುತ ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. |
| ಆ) | ಯಾದಗಿರಿ ತಾಲ್ಲೂಕಿನ ಹುಣಸಗಿ ಮತ್ತು ವಡಗೇರಾದಲ್ಲಿ ಸ್ಟೇಡಿಯಂ ನಿರ್ಮಾಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ಹಾಗೂ ಎಷ್ಟು ವಿಸ್ತೀರ್ಣದಲ್ಲಿ ನಿರ್ಮಾಣ ಮಾಡಲಾಗುತ್ತಿದೆ; (ವಿವರ ನೀಡುವುದು) | ಯಾದಗಿರಿ ಜಿಲ್ಲೆ ಹುಣಸಗಿಯಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ಸರ್ವೆ ನಂ. 231 ರಲ್ಲಿನ 8 ಎಕರೆ ಜಮೀನನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಮಂಜೂರು ಮಾಡಿ, ದಿನಾಂಕ: 26.07.2022 ರಂದು ಹಸ್ತಾಂತರ ಮಾಡಲಾಗಿರುತ್ತದೆ. ಸದರಿ ನಿವೇಶನದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಕ್ರೀಡಾಂಗಣವನ್ನು ರೂ 174.50 ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲು ಕ್ರಮ ವಹಿಸಲಾಗಿದೆ.<br><br>ಯಾದಗಿರಿ ಜಿಲ್ಲೆ ವಡಗೇರಾದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ವಡಗೇರಾ ಗ್ರಾಮದ ಸರ್ವೆ ನಂ. 581 ರಲ್ಲಿ 5 ಎಕರೆ ಜಮೀನು ಗುರುತಿಸಲಾಗಿದೆ. ಸದರಿ ಜಮೀನು ಕಂದಾಯ ಇಲಾಖೆ ವತಿಯಿಂದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಗೊಂಡ ನಂತರ ಕ್ರೀಡಾಂಗಣ ನಿರ್ಮಿಸಲು ಪರಿಗಣಿಸಲಾಗುವುದು. |

| | | |
|---|---|---|
| ಇ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನಿರ್ಮಾಣವಾಗುತ್ತಿರುವ ಕ್ರೀಡಾಂಗಣಗಳಿಗೆ ಸರ್ಕಾರ ನಿಗದಿಪಡಿಸಿರುವ ಅನುದಾನ ಎಷ್ಟು? (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ನಿರ್ಮಾಣ ಮಾಡಲಾಗುತ್ತಿರುವ ಅಂತರ್ ರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗೆ ರೂ.15.50 ಕೋಟಿಗಳ ಅನುದಾನವನ್ನು ಹಾಗೂ ಯಾದಗಿರಿ ಜಿಲ್ಲೆ ಹುಣಸಗಿ ಪಟ್ಟಣದ ಕ್ರೀಡಾಂಗಣ ನಿರ್ಮಾಣಕ್ಕಾಗಿ ರೂ.174.50 ಲಕ್ಷಗಳ ಅನುದಾನವನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ನಿಗದಿಪಡಿಸಲಾಗಿದೆ. |

**ವೈಎಸ್‌ಡಿ-ಇಬಿಬಿ/27/2023**

**(ಡಾ|| ಕೆ.ಸಿ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.